<u>ಸಾಕ್ಷಿಯನ್ನು ಸತ್ಯ ಪ್ರತಿಜ್ಞೆಯ ಮೇರೆಗೆ ಇಂದು ದಿನಾಂಕಃ 09.06.2026 ರಂದು ಪ್ರಮಾಣೀಕರಿಸಲಾಯಿತು.</u>

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ.ಎನ್.ಎಸ್.ಜಿ., ವಕೀಲರಿಂದ.**

ನಾನು ಈ ದಾವೆಯಲ್ಲಿ ವಾದಿ ಇರುತ್ತೇನೆ. ಈ ದಿನ ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮುಖಾಂತರ ಸಲ್ಲಿಸಿರುತ್ತೇನೆ. ನನ್ನ ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲಾ ವಿಷಯಗಳು ನನಗೆ ತಿಳಿದ ಮಾಹಿತಿಯಂತೆ ಸತ್ಯವಾಗಿರುತ್ತವೆ. ಪ್ರಮಾಣ ಪತ್ರವನ್ನು ನಾನು ನೀಡಿದ ಮಾಹಿತಿ ಮೇರೆಗೆ ತಯಾರಿಸಲಾಗಿರುತ್ತದೆ. ಪ್ರಮಾಣ ಪತ್ರವನ್ನು ನನಗೆ ಓದಿ ಹೇಳಲಾಗಿದ್ದು, ಅದನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಗಳನ್ನು ಈ ಕೆಳಕಂಡಂತೆ ಗುರುತಿಸಲಾಗಿರುತ್ತದೆ.

| | |
|---|---|
| ನಿ.ಪಿ.1 | ಗ್ರಾಂಟ್ ಸರ್ಟಿಫಿಕೇಟ್ |
| ನಿ.ಪಿ.2 | ಪಹಣಿ ಪತ್ರಿಕೆ |
| ನಿ.ಪಿ.3 | ಮ್ಯುಟೇಶನ್ ಪ್ರತಿ |
| ನಿ.ಪಿ.4 | ಪಹಣಿ ಪತ್ರಿಕೆ |

**ಪಾಟೀ ಸವಾಲುಃ ಎಜಿಪಿ ರವರಿಂದಃ**

ದಾವಾ ಆಸ್ತಿಯು ಸರ್ಕಾರದ ಆಸ್ತಿ ಎಂದರೆ ಸರಿಯಲ್ಲ. ಸರ್ಕಾರದ ಆಸ್ತಿಯಲ್ಲಿ ಅಕ್ರಮವಾಗಿ ಈ ಹಿಂದೆ ನಾನು ಪಹಣಿ ಪಡೆದುಕೊಂಡಿದ್ದೇನೆ ಎಂದರೆ ಸರಿಯಲ್ಲ. ನಿಪಿ.1 ರಂತೆ ನನಗೆ ಯಾವುದೇ ಆಸ್ತಿ ಮಂಜೂರಾಗಿಲ್ಲ ಎಂದರೆ ಸರಿಯಲ್ಲ. ಸರ್ವೇ ನಂಬರ್ 31 ಆಸ್ತಿಯು ಸರ್ಕಾರದ ಆಸ್ತಿಯಾಗಿದ್ದು ಅದು ಕೆರೆ ಅಂಗಳ ಜಮೀನು

ಎಂದರೆ ಸರಿಯಲ್ಲ. ಸರ್ಕಾರದ ಆಸ್ತಿಯನ್ನು ಕಬಳಿಸುವ ಉದ್ದೇಶದಿಂದ ಸುಳ್ಳು ದಾವೆ ಹೂಡಿ ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಉದ್ದೇಶಪೂರ್ವಕವಾಗಿ ದಾವಾ ಆಸ್ತಿಯ ಪ್ರಸ್ತುತ ಪಹಣಿಯನ್ನು ನೀಡಿಲ್ಲ ಎಂದರೆ ಸರಿಯಲ್ಲ. ಸಿವಿಲ್ ಪ್ರಕ್ರಿಯ ಸಂಹಿತೆ ಕಲಂ 80 ರಂತೆ ನೀಡಬೇಕಾದ ನೋಟೀಸನ್ನು ನೀಡದೆ ದಾವೆ ಹೂಡಿದ್ದೇನೆ ಎಂದರೆ ಸರಿಯಲ್ಲ. ಸರ್ವೇ ನಂಬರ್ 31 ಕೆರೆ ಅಂಗಳ ಜಮೀನಾಗಿದ್ದ ಕಾರಣ ಅದನ್ನು ಖಾಸಗಿ ವ್ಯಕ್ತಿಗಳಿಗೆ ಮಂಜೂರು ಮಾಡುವ ಅವಕಾಶವಿಲ್ಲ ಎಂದರೆ ಸರಿಯಲ್ಲ. ನಾನು ಸುಳ್ಳು ದಾಖಲೆಗಳನ್ನು ಸೃಷ್ಟಿಸಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿಯಾಗಿದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
*ಜೆ.ಎಂ.ಎಫ್.ಸಿ. ಶ್ರೀನಿವಾಸಪುರ.*